**All India Radio: Bangalore**
**Regional Bulletin In Kannada**
**24.09.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.09.2025 / 6.40 p.m.**

**<><><><>**

ಮುಖ್ಯಾಂಶಗಳು :

- ಹಿರಿಯ ಸಾಹಿತಿ, ಕಾದಂಬರಿಕಾರ ಎಸ್.ಎಲ್.ಭೈರಪ್ಪ ಬೆಂಗಳೂರಿನಲ್ಲಿಂದು ನಿಧನ; ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಗಣ್ಯರ ಸಂತಾಪ
- ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ- ನ್ಯಾಯಿಕ ವಿಚಾರಣೆ ನಾಳೆಗೆ ಮುಂದೂಡಿಕೆ
- ಸಾಮಾಜಿಕ ಜಾಲತಾಣಗಳಲ್ಲಿನ ಅಂಶ ನಿರ್ಬಂಧಿಸುವ ಕ್ರಮ ಪ್ರಶ್ನಿಸಿ ಎಕ್ಸ್‌ಕಾರ್ಪ್ ಸಲ್ಲಿಸಿದ ಅರ್ಜಿ ವಜಾಗೊಳಿಸಿದ ಉಚ್ಚ ನ್ಯಾಯಾಲಯ
- ಮೈಸೂರಿನಲ್ಲಿ ಕಳೆಗಟ್ಟಿದ ದಸರಾ; ನೈರುತ್ಯ ರೈಲ್ವೆಯಿಂದ ೫೧ ಹೆಚ್ಚುವರಿ ವಿಶೇಷ ರೈಲು ಸೇವೆ

<><><><>

ಪದ್ಮಭೂಷಣ, ಹಿರಿಯ ಸಾಹಿತಿ ಎಸ್.ಎಲ್.ಭೈರಪ್ಪ ಬೆಂಗಳೂರಿನ ರಾಜರಾಜೇಶ್ವರಿನಗರದ ಆಸ್ಪತ್ರೆಯಲ್ಲಿ ಇಂದು ಕೊನೆಯುಸಿರೆಳೆದಿದ್ದಾರೆ. ಭೈರಪ್ಪ ಅವರು ವಯೋಸಹಜ ಹಾಗೂ ಮರೆವಿನ ಕಾಯಿಲೆಯಿಂದ ಬಳಲುತ್ತಿದ್ದರು. ಕಳೆದ ૩ ತಿಂಗಳಿನಿಂದ ಮೈಸೂರು ಬಿಟ್ಟು ಬೆಂಗಳೂರಿನಲ್ಲಿ ವಾಸವಾಗಿದ್ದರು. ೯೪ ವರ್ಷದ ಹಿರಿಯ ಸಾಹಿತಿ ಎಸ್. ಎಲ್. ಭೈರಪ್ಪ ಅವರು ಒಬ್ಬ ಪ್ರಸಿದ್ಧ ಕನ್ನಡ ಕಾದಂಬರಿಕಾರ, ತತ್ವಜ್ಞಾನಿ ಮತ್ತು ಲೇಖಕರಾಗಿದ್ದು, ೨೦೧೬ರಲ್ಲಿ ಪದ್ಮಶ್ರೀ, ೨೦೨೩ರಲ್ಲಿ ಇವರು ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. ೨೦೧೦ರಲ್ಲಿ ಸರಸ್ವತಿ ಸಮ್ಮಾನ್ ಪ್ರಶಸ್ತಿ ಭೈರಪ್ಪ ಅವರಿಗೆ ಒಲಿದು ಬಂದಿತ್ತು. ಭೈರಪ್ಪ ಅವರು ಪರ್ವ, ಆವರಣ, ಗೃಹಭಂಗ, ಮತದಾನ, ವಂಶವೃಕ್ಷ, ನಾಯಿನೆರಳು, ದಾಟು, ಉತ್ತರಕಾಂಡ, ಯಾನ, ಕವಲು, ಸಾಕ್ಷಿ ಸೇರಿದಂತೆ ಅನೇಕ ಕಾದಂಬರಿಗಳನ್ನು ಬರೆದಿದ್ದಾರೆ. ವಂಶವೃಕ್ಷ ಕಾದಂಬರಿಗೆ ೧೯೬೬ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ, ದಾಟು ಕಾದಂಬರಿಗೆ ೧೯೭೫ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ದೊರೆತಿದೆ. ಭೈರಪ್ಪ ಅವರ ಕಾದಂಬರಿಗಳು ದೇಶ-ವಿದೇಶಗಳ ಭಾಷೆಗಳಿಗೆ ಅನುವಾದಗೊಂಡಿವೆ. ವಂಶವೃಕ್ಷ, ಸಾಕ್ಷಿ ಹಾಗೂ ಪರ್ವ ಕೃತಿಗಳು ಇಂಗ್ಲೀಷ್‌ಗೆ ಭಾಷಾಂತರಗೊಂಡಿದೆ. ಹಾಸನ ಜಿಲ್ಲೆಯ ಸಂತೇಶಿವಾರ ಗ್ರಾಮದವರಾದ ಇವರು ತಮ್ಮ

ಸ್ವಗ್ರಾಮದ ಕೆರೆಗಳಿಗೆ ನೀರು ತುಂಬಿಸಲು ಕೂಡ ಶ್ರಮಿಸಿದ್ದರು. ಕನ್ನಡ ಸಾರಸ್ವತ ಲೋಕದ ಹಿರಿಯ ಬರಹಗಾರರಾದ ಎಸ್.ಎಲ್.ಭೈರಪ್ಪನವರ ನಿಧನ ಸುದ್ದಿ ನೋವು ತಂದಿದೆ. ಭೈರಪ್ಪನವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಸಂತಾಪ ಸೂಚಿಸಿದ್ದಾರೆ. ಅಪಾರ ಓದುಗರನ್ನು ಹೊಂದಿದ್ದ ಭೈರಪ್ಪನವರ ನಿಧನದಿಂದ ಸಾಹಿತ್ಯಲೋಕ ಬಡವಾಗಿದೆ ಎಂದು ಹೇಳಿದ್ದಾರೆ. ಎಸ್.ಎಲ್. ಭೈರಪ್ಪ ಅವರ ನಿಧನದಿಂದ ಬೇಸರವಾಗಿದೆ. ನಮ್ಮ ಆತ್ಮಸಾಕ್ಷಿಯನ್ನು ಕಲಕಿ, ಭಾರತದ ಆತ್ಮವನ್ನು ಆಳವಾಗಿ ಅಧ್ಯಯನ ಮಾಡಿದ ಒಬ್ಬ ಮಹಾನ್ ಧೀಮಂತ ವ್ಯಕ್ತಿಯನ್ನು ನಾವು ಕಳೆದುಕೊಂಡಿದ್ದೇವೆ ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಕೇಂದ್ರ ಸಚಿರಾದ ಹೆಚ್.ಡಿ.ಕುಮಾರಸ್ವಾಮಿ, ವಿ.ಸೋಮಣ್ಣ, ಪ್ರಲ್ಹಾದ್ ಜೋಶಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ನಾಳೆ ಬೆಳಿಗ್ಗೆ ೮ ಗಂಟೆಯ ಬಳಿಕ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಶುಕ್ರವಾರ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

<><><><>

ಹಿರಿಯ ಸಾಹಿತಿ ಎಸ್. ಎಲ್. ಭೈರಪ್ಪ ಅವರ ನಿಧನಕ್ಕೆ ಹಲವಾರು ಗಣ್ಯರು ಸಂತಾಪ ಸೂಚಿಸಿದ್ದಾರೆ. ಅವರ ಕುರಿತು ಅನೇಕ ಪುಸ್ತಕಗಳನ್ನು ಬರೆದ ಮೈಸೂರು ಆಕಾಶವಾಣಿ ನಿವೃತ್ತ ನಿಲಯ ನಿರ್ದೇಶಕರಾದ ವಿಜಯ್ ಹಾರನ್ ಅವರ ಒಡನಾಟದ ಬಗ್ಗೆ ಆಕಾಶವಾಣಿಯೊಂದಿಗೆ ನೆನಪುಗಳನ್ನು ಹಂಚಿಕೊಂಡಿದ್ದಾರೆ. ಅವರ ನಿಧನ ಸಾಹಿತ್ಯ ಲೋಕಕ್ಕೆ ತುಂಬಲಾರದ ನಷ್ಟ ಎಂದಿದ್ದಾರೆ.

**ಧ್ವನಿ : ವಿಜಯ ಹಾರನ್, ಮೈಸೂರು ಆಕಾಶವಾಣಿ ನಿವೃತ್ತ ನಿಲಯ ನಿರ್ದೇಶಕ**

ಹಿರಿಯ ವಿದ್ವಾಂಸ ಡಾ. ಶತಾವಾಧಾನಿ ಆರ್.ಗಣೇಶ್, ಆಕಾಶವಾಣಿಯೊಂದಿಗೆ ಎಸ್.ಎಲ್.ಭೈರಪ್ಪ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದ್ದಾರೆ. ಭೈರಪ್ಪ ಅವರಂತಹ ಕಾದಂಬರಿಕಾರರು ಮತ್ತೊಬ್ಬರಿಲ್ಲ ಎಂದು ತಿಳಿಸಿದ್ದಾರೆ.

**ಧ್ವನಿ : ಡಾ. ಶತಾವಾಧಾನಿ ಆರ್.ಗಣೇಶ್, ಹಿರಿಯ ವಿದ್ವಾಂಸ**

<><><><>

ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಅರಿಯಲು ಸರ್ಕಾರ ನಡೆಸುತ್ತಿರುವ ಸಮೀಕ್ಷೆ ಪ್ರಶ್ನಿಸಿ ವಿವಿಧ ಸಮುದಾಯಗಳು ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಹೈಕೋರ್ಟ್ ನಾಳೆಗೆ

ಮುಂದೂಡಿದೆ. ರಾಜ್ಯಾದ್ಯಂತ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ಸಮೀಕ್ಷೆಯಿಂದ ಗೌಪ್ಯತೆಯ ಹಕ್ಕಿನ ಮೇಲೆ ಹಸ್ತಕ್ಷೇಪ ನಡೆಯುತ್ತಿದೆ ಎಂದು ಅರ್ಜಿದಾರರು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಆದರೆ ಆಯೋಗವು ಈ ಆರೋಪವನ್ನು ತಳ್ಳಿಹಾಕಿದೆ. ಆಧಾರ್ ಕಾರ್ಡ್‌ಅನ್ನು ಗುರುತಿನ ಉದ್ದೇಶಗಳಿಗಾಗಿ ಮಾತ್ರ ಬಳಸಲಾಗುತ್ತಿದೆ. ಜನರು ಜಾತಿ, ಧರ್ಮ ಇತ್ಯಾದಿ ವಿವರಗಳನ್ನು ಗಣತಿದಾರರಿಗೆ ಬಹಿರಂಗಪಡಿಸಲು ಯಾವುದೇ ಬಲವಂತವಿಲ್ಲ ಎಂದು ಹೇಳಿದೆ. ವಾದ ಮತ್ತು ಪ್ರತಿವಾದ ಆಲಿಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು ಮತ್ತು ನ್ಯಾಯಮೂರ್ತಿ ಸಿ.ಎಂ. ಜೋಶಿ ಅವರ ವಿಭಾಗೀಯ ಪೀಠ ವಿಚಾರಣೆಯನ್ನು ನಾಳೆಗೆ ಮುಂದೂಡಿದೆ.

<><><><>

ಸಾಮಾಜಿಕ ಜಾಲತಾಣಗಳಲ್ಲಿನ ಅಂಶಗಳನ್ನು ತೆರವುಗೊಳಿಸಲು ಐಟಿ ಕಾಯ್ದೆ ಸೆಕ್ಷನ್ ೭೯(೩)(ಬಿ) ಬಳಕೆಯನ್ನು ಪ್ರಶ್ನಿಸಿ ಎಲಾನ್ ಮಸ್ಕ್ ಒಡೆತನದ ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್ ಕಾರ್ಪ್ ಸಲ್ಲಿಸಿದ ಅರ್ಜಿಯನ್ನು ಕರ್ನಾಟಕ ಉಚ್ಚ ನ್ಯಾಯಾಲಯ ವಜಾಗೊಳಿಸಿದೆ. ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ನೇತೃತ್ವದ ಪೀಠವು ಸಾಮಾಜಿಕ ಮಾಧ್ಯಮದ ನಿಯಂತ್ರಣ ಅತ್ಯಗತ್ಯ ಎಂದು ಹೇಳಿದೆ. ಸ್ವಾತಂತ್ರ್ಯದ ನೆಪದಲ್ಲಿ ಅನಿಯಂತ್ರಿತ ಭಾಷೆಯು ಕಾನೂನು ಬಾಹಿರ ಎಂದು ನ್ಯಾಯಾಲಯ ಪ್ರತಿಪಾದಿಸಿದೆ. ಭಾರತೀಯರನ್ನು ಹೊರತು ಪಡಿಸಿ ಯಾರು ವಾಕ್ ಸ್ವಾತಂತ್ರ್ಯದ ಹಕ್ಕನ್ನು ಹೊಂದಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

<><><><>

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವಕ್ಕೆ ರಾಜ್ಯ ಹಾಗೂ ಅಂತರಾಜ್ಯದಿಂದ ಹೆಚ್ಚಿನ ಪ್ರವಾಸಿಗರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು, ಶಿವಮೊಗ್ಗ, ತಮಿಳುನಾಡು ಸೇರಿದಂತೆ ಇತರೆ ಸ್ಥಳಗಳಿಂದ ೫೧ ಹೆಚ್ಚುವರಿ ವಿಶೇಷ ರೈಲಿನ ಸಂಪರ್ಕ ಕಲ್ಪಿಸಲಾಗಿದೆ ಎಂದು ನೈರುತ್ಯ ರೈಲ್ವೆಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ ಗಿರೀಶ್ ಧರ್ಮರಾಜ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೫೧ ವಿಶೇಷ ರೈಲಿನಲ್ಲಿ ೧೧ ಕಾಯ್ದಿರಿಸದ ವಿಶೇಷ ರೈಲು, ೨೭ ಎಕ್ಸ್ ಪ್ರೆಸ್ ವಿಶೇಷ ರೈಲು, ೩ ತಾತ್ಕಾಲಿಕ ನಿಲ್ದಾಣ ಸೌಲಭ್ಯಗಳು, ೨ ತಾತ್ಕಾಲಿಕ ವಿಸ್ತರಣೆಗಳು ಹಾಗೂ ೮ ರೈಲುಗಳು ಅವಧಿ ವಿಸ್ತರಣೆಗಳು ಸೇರಿವೆ ಎಂದು ಮಾಹಿತಿ ನೀಡಿದ್ದಾರೆ. ಜನಸಂದಣಿ ನಿಯಂತ್ರಣಕ್ಕಾಗಿ ಹೆಚ್ಚುವರಿ ೭೦ ಸಿಬ್ಬಂದಿ ನಿಯೋಜಿಸಲಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಆರ್ ಪಿಎಫ್ ಹಾಗೂ ಜಿಆರ್ ಪಿ ಸಿಬ್ಬಂದಿ ಕರ್ತವ್ಯ

ನಿರ್ವಹಿಸಲಿದ್ದಾರೆ. ರೈಲ್ವೆ ನಿಲ್ದಾಣದ ಚಲನವಲನಗಳ ಬಗ್ಗೆ ೫೦ ಸಿಸಿಟಿವಿ ಕ್ಯಾಮರಾಗಳ ಮೂಲಕ ನಿಗಾ ಇಡಲಾಗುವುದು ಎಂದು ತಿಳಿಸಿದ್ದಾರೆ.

<><><><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ದಸರಾ ಸಂಭ್ರಮ ಕಳೆಗಟ್ಟಿದೆ. ರೈತ ದಸರಾ-೨೦೨೫ನ್ನು ಇದೇ ೨೬ ರಿಂದ ೨೮ ರವರೆಗೆ ಆಯೋಜಿಸಲಾಗಿದೆ. ರಾಜ್ಯಮಟ್ಟದ ಹಾಲು ಕರೆಯುವ ಸ್ಪರ್ಧೆ ಮತ್ತು ಹಾಲು ಕರೆಯುವ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮವು ನಡೆಯಲಿದೆ. ಪಂಚಕಾವ್ಯದೌತಣ ಕವಿಗೋಷ್ಠಿಯ ೨ನೇ ದಿನದ ಪ್ರಚುರ ಕವಿಗೋಷ್ಠಿಯಲ್ಲಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸಾಹಿತಿಗಳು, ಕವಿಗಳು, ಕವಯತ್ರಿಗಳು ಕವಿತೆ ವಾಚನ ಮಾಡಿದರು.

<><><><>

ನಾಡಹಬ್ಬ ಮೈಸೂರು ದಸರಾದ ಮೂಲ ಶ್ರೀರಂಗಪಟ್ಟಣ ಪಾರಂಪರಿಕ ದಸರಾ ಕಾರ್ಯಕ್ರಮವು ಇದೇ ೨೫ ರಿಂದ ೨೮ ವರೆಗೆ ನಡೆಯಲಿದೆ. ಶ್ರೀರಂಗಪಟ್ಟಣ ಜಂಬೂಸವಾರಿ ಮೆರವಣಿಗೆಗೆ ಕನ್ನಡ ಚಲನಚಿತ್ರ ನಿರ್ದೇಶಕ ಡಾ.ಟಿ.ಎಸ್. ನಾಗಭರಣ ಚಾಲನೆ ನೀಡಲಿದ್ದಾರೆ. ಶ್ರೀರಂಗಪಟ್ಟಣ ದಸರಾ ಸಾಂಸ್ಕೃತಿಕ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಉದ್ಘಾಟಿಸಲಿದ್ದಾರೆ.

<><><><>

ಸಂವಿಧಾನದ ಆಶಯದಂತೆ ಜನಸಾಮಾನ್ಯರಿಗೆ ನ್ಯಾಯಯುತವಾದ ಜೀವನವನ್ನು ಒದಗಿಸುವುದು ಸರ್ಕಾರದ ಮುಖ್ಯ ಗುರಿಯಾಗಿದೆ ಎಂದು ನ್ಯಾಯಮೂರ್ತಿ ಉಪಲೋಕಾಯುಕ್ತ ಕೆ.ಎನ್.ಫಣೀಂದ್ರ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿಂದು ಸಾರ್ವಜನಿಕ ಕುಂದುಕೊರತೆಗಳ ಅಹವಾಲು ಸ್ವೀಕಾರ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ವರಿಗೂ ಸಮಪಾಲು, ಸಮಬಾಳು ಎಂಬ ಸಂವಿಧಾನದ ಆಶೋತ್ತರದ ಅಡಿಯಲ್ಲಿ ಲೋಕಾಯುಕ್ತ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>